ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಹೋಂ ಸ್ಟೇ ಮತ್ತು ರೆಸಾರ್ಟ್

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):-

722 (778) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) "ಹೋಂ ಸ್ಟೇ" ಮತ್ತು ರೆಸಾರ್ಟ್‌ಗಳನ್ನು ಪ್ರಾರಂಭಿಸಲು ಇರುವ ನಿಯಮಗಳೇನು ; (ಆದೇಶಗಳನ್ನು ಒದಗಿಸುವುದು)

(ಆ) ರಾಜ್ಯದಲ್ಲಿರುವ "ಹೋಂ ಸ್ಟೇ" ಮತ್ತು ರೆಸಾರ್ಟ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಅಕ್ರಮವಾಗಿ ನಡೆಸುತ್ತಿರುವ "ಹೋಂ ಸ್ಟೇ" ಮತ್ತು ರೆಸಾರ್ಟ್‌ಗಳು ಎಷ್ಟು ಹಾಗೂ ಸರ್ಕಾರ ಅವುಗಳ ವಿರುದ್ಧ ಕೈಗೊಂಡಿರುವ ಕ್ರಮ ಏನು ;

(ಈ) "ಹೋಂ ಸ್ಟೇ" ಹಾಗೂ ರೆಸಾರ್ಟ್‌ಗಳಿಗೆ ಸಂಪರ್ಕ ಕಲ್ಪಿಸಲು ಅಕ್ರಮವಾಗಿ ಸಂರಕ್ಷಿತ ಅರಣ್ಯಗಳಲ್ಲಿ ರಸ್ತೆಗಳನ್ನು ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)